All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

04.03.2026 2.30 p.m.

<><><><>

ಮುಖ್ಯಾಂಶಗಳು

- ರಾಜ್ಯದಲ್ಲಿ ಪ್ರತಿಭಟನೆಗಳು ಕಾನೂನು ಚೌಕಟ್ಟನ್ನು ಅನುಸರಿಸಬೇಕು - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ
- ಕೈಗಾರಿಕೆ, ವಾಣಿಜ್ಯ ಸಂಪರ್ಕದ ವಿದ್ಯುತ್ ದರ ಏರಿಸಿದ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ
- ಬೆಂಗಳೂರು ನಗರದಿಂದ ೪೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಬಿಎಂಟಿಸಿ ಬಸ್ ವ್ಯವಸ್ಥೆ - ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ
- ಒಳಮೀಸಲಾತಿ ಪರಿಗಣಿಸಿ ಸರ್ಕಾರ ಉದ್ಯೋಗ ಸೃಷ್ಟಿಸಬೇಕು ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹ
- ರಾಜ್ಯದೆಲ್ಲೆಡೆ ಹೋಳಿ ಹಬ್ಬದ ಸಂಭ್ರಮ ; ಪರಸ್ಪರ ಬಣ್ಣ ಎರಚಿ ಶುಭಾಶಯ ವಿನಿಮಯ

<><><><>

ಇರಾನ್ ಸರ್ವೋಚ್ಛ ನಾಯಕ ಖಮೆನ್ಯೈ ಹತ್ಯೆ ವಿರೋಧಿಸಿ ರಾಜ್ಯದಲ್ಲಿ ಮೆರವಣಿಗೆಗಳಿಗೆ ರಾಜ್ಯ ಸರ್ಕಾರ ಅನುಮತಿ ನೀಡುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಭಟನೆಗಳು ದೇಶದಲ್ಲಿ ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟನ್ನು ಅನುಸರಿಸಬೇಕು ಎಂದು ಸೂಚಿಸಿದ್ದಾರೆ. ನ್ಯಾಯಾಲಯ ಯಾವುದೇ ಮೆರವಣಿಗೆಗಳನ್ನು ನಡೆಸಬಾರದು ಎಂದು ಆದೇಶಿಸಿರುವುದರಿಂದ ಮುಂದಿನ ದಿನಗಳಲ್ಲಿ ಮೆರವಣಿಗಳಿಗೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಯುಎಇ ಯಲ್ಲಿ ೧೦ ಮಿಲಿಯನ್‌ಗಿಂತಲೂ ಹೆಚ್ಚು ಭಾರತೀಯರು ನೆಲೆಸಿದ್ದಾರೆ. ಭಾರತದ ರಾಯಭಾರ ಕಚೇರಿಯು ಯುಎಇಯಲ್ಲಿ ಸಿಲುಕಿರುವ ಭಾರತೀಯರೊಂದಿಗೆ ಸಂಪರ್ಕದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯ ಆಯೋಜಿಸುವ ಮೊದಲು ಎಲ್ಲಾ ಸುರಕ್ಷತಾ ಮಾನದಂಡಗಳನ್ನು ಜಾರಿಗೆ ತರಲಾಗುವುದು ಹಾಗೂ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ವಾಣಿಜ್ಯ ಮತ್ತು ಕೈಗಾರಿಕಾ ವಲಯಕ್ಕೆ ೨೦೨೫-೨೬ ರ ಆರ್ಥಿಕ ವರ್ಷಕ್ಕೆ ಅನ್ವಯಿಸುವಂತೆ ವಿದ್ಯುತ್ ದರ ಏರಿಕೆ ಮಾಡಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಆದೇಶ ನೀಡಿದೆ. ವಾಣಿಜ್ಯ ಬಳಕೆ ವಿದ್ಯುತ್ ದರವನ್ನು ೭ ರೂಪಾಯಿ ೧೦ ಪೈಸೆಗೆ ಏರಿಕೆ ಮಾಡಲಾಗಿದೆ. ಕೈಗಾರಿಕೆಗೆ ಬಳಸುವ ವಿದ್ಯುತ್ ದರವನ್ನು ೪ ರೂಪಾಯಿ ೫೦ ಪೈಸೆಯಿಂದ ೫ ರೂಪಾಯಿ ೨೦ ಪೈಸೆಗೆ ಏರಿಕೆ ಮಾಡಲಾಗಿದೆ. ಮೆಟ್ರೋ, ರೈಲ್ವೆ ಮತ್ತು ಇತರ ವಿದ್ಯುತ್ ದರವನ್ನು ೬ ರೂಪಾಯಿ ೬೦ ಪೈಸೆಯಿಂದ ೬ ರೂಪಾಯಿ ೭೦ ಪೈಸೆಗೆ ಏರಿಕೆ ಮಾಡಲಾಗಿದೆ. ಬಹುಮಹಡಿ ಕಟ್ಟಡಗಳು, ಥಿಯೇಟರ್, ಹೋಟೇಲ್‌ಗೆ ಬಳಸುವ ವಿದ್ಯುತ್ ದರವನ್ನು ೫ ರೂಪಾಯಿ ೯೫ ಪೈಸೆಯಿಂದ ೬ ರೂಪಾಯಿ ೯೦ ಪೈಸೆಗೆ ಏರಿಕೆ ಮಾಡಲಾಗಿದೆ.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಳೆ ಬೆಳಗಾವಿ ಜಿಲ್ಲೆಯ ಪ್ರವಾಸ ಕೈಗೊಳ್ಳಲಿದ್ದಾರೆ. ಚಿಕ್ಕೋಡಿ ತಾಲೂಕಿನ ಯಡೂರಿನ ವೀರಭದ್ರೇಶ್ವರ ದೇವಾಲಯದ ರಾಜಗೋಪುರ ಕಳಸಾರೋಹಣ ಹಾಗೂ ಮಹಾಕುಂಭ ಅಭಿಷೇಕ ಸಮಾರಂಭದಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ. ನಾಳೆ ಬೆಳಗ್ಗೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದು, ನಂತರ ಹೆಲಿಕಾಪ್ಟರ್ ಮೂಲಕ ಚಿಕ್ಕೋಡಿಗೆ ತೆರಳಲಿದ್ದಾರೆ.

<><><>

ಬೆಂಗಳೂರು ನಗರದಿಂದ ೪೦ ಕಿಲೋಮೀಟರ್ ಸುತ್ತಮುತ್ತಲ ಜನರಿಗೆ ಅನುಕೂಲವಾಗಲೆಂದು ಬಿಎಂಟಿಸಿ ಬಸ್ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಶೀಘ್ರವೇ ಮಾಲೂರು, ಎಚ್.ಕ್ರಾಸ್ ಸ್ಥಳಗಳಿಗೆ ನಗರ ಸಾರಿಗೆ ಸೇವೆ ಒದಗಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ರಾಮನಗರದಲ್ಲಿಂದು ಬೆಂಗಳೂರು ನಗರಕ್ಕೆ ಬಿಎಂಟಿಸಿ ಹಾಗೂ ವಾಯು ವಜ್ರ ಹವಾ ನಿಯಂತ್ರಿತ ಬಸ್ ಸೌಲಭ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸೂಕ್ತ ಸ್ಥಳಾವಕಾಶ ನೀಡಿದರೆ ರಾಮನಗರ ಮತ್ತು ಹಾರೋಹಳ್ಳಿಯಲ್ಲಿ ತಕ್ಷಣ ಬಸ್ ನಿಲ್ದಾಣ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು ಎಂದು ಹೇಳಿದ್ದಾರೆ. ಜಿಲ್ಲೆಯ ಬಿಡದಿ, ಚನ್ನಪಟ್ಟಣಕ್ಕೆ ಹೆಚ್ಚುವರಿ ಬಸ್ ಸೌಲಭ್ಯ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಮಹಿಳೆಯರಿಗೆ ನೀಡಿರುವ ಶಕ್ತಿ ಯೋಜನೆಯಡಿ ಇದುವರೆಗೆ ೬೯೦ ಕೋಟಿ ಮಹಿಳೆಯರು ಪ್ರಯಾಣಿಸಿದ್ದಾರೆ. ಸರ್ಕಾರದ ಯೋಜನೆಯಿಂದ ರಾಜ್ಯದಲ್ಲಿ ಹೊಸ ಉದ್ಯೋಗಗಳು ಸೃಷ್ಟಿಯಾಗಿವೆ ಎಂದು ಹೇಳಿದ್ದಾರೆ. ಶಾಸಕ ಇಕ್ಬಾಲ್ ಹುಸೇನ್ ಮಾತನಾಡಿ, ರಾಮನಗರ ಜಿಲ್ಲಾ ಕೇಂದ್ರದಲ್ಲಿ ಸೂಕ್ತ ಬಸ್ ನಿಲ್ದಾಣದ ಅಗತ್ಯವಿದ್ದು ಸಚಿವರು ಇತ್ತ ಗಮನಹರಿಸಬೇಕು ಎಂದು ಮನವಿ ಮಾಡಿದ್ದಾರೆ.

<><><>

ಒಳಮೀಸಲಾತಿಯನ್ನು ಪರಿಗಣಿಸಿ ಸರ್ಕಾರ ಉದ್ಯೋಗ ಸೃಷ್ಟಿ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ

ಮಾತನಾಡಿದ ಅವರು, ಸರ್ಕಾರ ನ್ಯಾಯಾಲಯದ ಕುಂಟುನೆಪ ಹೇಳಬಾರದು. ಉದ್ಯೋಗ ಸೃಷ್ಟಿ ಮಾಡದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಸರ್ಕಾರ ಇದುವರೆಗೆ ಅತಿಥಿ ಉಪನ್ಯಾಸಕರ ಯಾವುದೇ ಭರವಸೆ ಈಡೇರಿಸಿಲ್ಲ, ಶೀಘ್ರವೇ ಅಂಗನವಾಡಿ, ಆಶಾಕಾರ್ಯಕರ್ತೆಯರು ಹೋರಾಟ ಆರಂಭಿಸಲಿದ್ದಾರೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಆಡಳಿತ ನಡೆಸುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಅವರು ದೂರಿದ್ದಾರೆ.

<><><><>

ರಾಜ್ಯದೆಲ್ಲೆಡೆ ಬಣ್ಣಗಳ ಹಬ್ಬ ಹೋಳಿ ಸಂಭ್ರಮ ಮನೆ ಮಾಡಿದೆ. ವಸಂತ ಋತುವಿನ ಆಗಮನವನ್ನು ಸಾರುವ ಹೋಳಿ ಹಬ್ಬವನ್ನು ದೇಶಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಜನರು ಬಣ್ಣಗಳನ್ನು ಎರಚಿಕೊಂಡು ಪರಸ್ಪರ ಶುಭಾಶಯ ವಿನಿಮಯ ಮಾಡುವ ಮೂಲಕ ಹಬ್ಬ ಆಚರಿಸುತ್ತಾರೆ. ಕರ್ನಾಟಕದ ಹಲವೆಡೆ ಹೋಳಿಯನ್ನು ಕಾಮನಹಬ್ಬ ಎಂದೂ ಆಚರಿಸಲಾಗುತ್ತಿದೆ. ದಾವಣಗೆರೆಯಲ್ಲಿ ಹೋಳಿ ಸಂಭ್ರಮ ಇಮ್ಮಡಿಗೊಂಡಿದೆ. ಮುಂಜಾನೆಯಿಂದಲೆ ಮಕ್ಕಳು, ಹಿರಿಯರು ಸೇರಿ ಪರಸ್ಪರ ಬಣ್ಣಗಳಲ್ಲಿ ಮಿಂದೆದಿದ್ದಾರೆ. ರಾಮ್ ಅಂಡ್ ಕೋ ವೃತ್ತದಲ್ಲಿ ಸಾಂಪ್ರದಾಯಿಕ ಮಡಿಕೆ ಒಡೆಯುವ ಸ್ವರ್ಧೆಯಲ್ಲಿ ಸಾವಿರಾರು ಯುವಕರು ಭಾಗವಹಿಸಿದ್ದರು. ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಕೈ ಗೊಳ್ಳಲಾಗಿದೆ. ಹುಬ್ಬಳ್ಳಿಯ ಮೂರು ಸಾವಿರಮಠದ ಆವರಣದಲ್ಲಿ ನಾಳೆ ಜಗ್ಗಲಗಿ ಹಬ್ಬ ಸಮಿತಿ ವತಿಯಿಂದ ಹೋಳಿ ಹಬ್ಬ ನಡೆಯಲಿದೆ. ೩೦ಕ್ಕೂ ಹೆಚ್ಚು ಮಠಾಧೀಶರು, ನಾಗಾಸಾಧುಗಳು ಹೋಳಿ ಆಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಶಾಸಕ ಮಹೇಶ ಟೆಂಗಿನಕಾಯಿ ತಿಳಿಸಿದ್ದಾರೆ. ಜಗ್ಗಲಗಿ ಹಬ್ಬಕ್ಕೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಚಾಲನೆ ನೀಡಲಿದ್ದಾರೆ. ಈ ಭಾರಿ ಚರ್ಮ ವಾದ್ಯ ನುಡಿಸುವ ಕಲಾವಿದರನ್ನು ಹೋಳಿ ಹಬ್ಬದಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಬಳ್ಳಾರಿ ನಗರದಲ್ಲಿ ಕಳೆದ ರಾತ್ರಿ ಹಲವಡೆ ಕಾಮನ ಪ್ರತಿಕೃತಿ ಮಾಡಿ ಹೋಳಿ ಹಬ್ಬ ಆಚರಿಸಲಾಗಿದೆ. ಸಂಪ್ರದಾಯ ಬದ್ಧವಾಗಿ ತಮಟೆ ಬಾರಿಸುತ್ತಾ, ಸಾಗಿ ಬಳಿಕ ಕಾಮನ ದಹನ ಮಾಡಲಾಗಿದೆ. ಇಂದು ಮಕ್ಕಳು, ಯುವಕರು, ಮಹಿಳೆಯರು ಪರಸ್ಪರ ಬಣ್ಣ ಎರಚಿ ಸಂಭ್ರಮಿಸಿದರು. ಇನ್ನೂ ಕೆಲವೆಡೆ ವಿಶೇಷ ಪೂಜೆ ಸಲ್ಲಿಸಿ, ದುಷ್ಟಶಕ್ತಿಗಳ ನಾಶ ಹಾಗೂ ಸಂಕಲ್ಪಗಳ ಸಿದ್ಧಿಗಾಗಿ ಪ್ರಾರ್ಥಿಸಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸ್ ಇಲಾಖೆ ಭದ್ರತಾ ಕ್ರಮಗಳನ್ನು ಕೈಗೊಂಡಿದೆ.

<><><><>

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ವಿದ್ಯಾರ್ಥಿಗಳು ಓದು ಮತ್ತು ಅಧ್ಯಯನ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಮಾಧ್ಯಮ ಕ್ಷೇತ್ರದ ವಿವಿಧ ಆಯಾಮಗಳಲ್ಲಿ ಕೌಶಲ್ಯ ರೂಪಿಸಿಕೊಳ್ಳಲು ಪತ್ರಿಕೋದ್ಯಮ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ

ನೆರವಾಗುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯ ಜ್ಞಾನಭಾರತಿ, ಸಹಭಾಗಿತ್ವದಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ವಿಶೇಷ ಕಾರ್ಯಗಾರ "ಮಾಧ್ಯಮ ಹಬ್ಬ- ೨೦೨೬" ಉದ್ಘಾಟಿಸಿ ಅವರು ಮಾತನಾಡಿದರು. ಪತ್ರಿಕೋದ್ಯಮ ವಿದ್ಯಾರ್ಥಿಗಳು ಸ್ವತಂತ್ರ ವ್ಯಕ್ತಿತ್ವ ಸಂಘಟನಾ ಮನೋಭಾವ ಅಳವಡಿಸಿಕೊಳ್ಳಬೇಕು. ನೈಜ ಮತ್ತು ನಿಖರ ಸುದ್ದಿಗಳನ್ನು ನೀಡಿ ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ನಿರ್ವಹಿಸಲು ಪ್ರಯತ್ನಿಸಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದಾರೆ.

<><><><>

ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಪಲಮನೇರು ಬಳಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಬೆಂಗಳೂರಿನ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದಾರೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರಯಾಣಿಸುತ್ತಿದ್ದ ಕಾರು ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಢಿಕ್ಕಿ ಹೊಡೆದ ಪರಿಣಾಮ ಈ ಅಪಘಾತ ಸಂಭವಿಸಿದೆ. ಮೃತರಲ್ಲಿ ಇಬ್ಬರು ಪುರುಷರು, ಮೂವರು ಮಹಿಳೆಯರು ಸೇರಿದ್ದಾರೆ. ಈ ಕುಟುಂಬವು ತಿರುಮಲ ದರ್ಶನಕ್ಕಾಗಿ ತಿರುಪತಿಗೆ ತೆರಳುತ್ತಿದ್ದಾಗ ಅಪಘಾತ ಸಮಭವಿಸಿದೆ ಎಂದು ಚಿತ್ತೂರು ಪೊಲೀಸ್ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

<><><><>

ಕಲಬುರಗಿಯಲ್ಲಿ ನಡೆಯುತ್ತಿರುವ ಐಟಿಎಫ್ ಡಬ್ಲ್ಯು-೩೫ ಕಲಬುರಗಿ ಟೆನಿಸ್ ಟೂರ್ನಿಯ ಸಿಂಗಲ್ಸ್ ವಿಭಾಗದಲ್ಲಿ ಭಾರತದ ವೈಷ್ಣವಿ ಅಡ್ಕರ್ ನೇರ ಸೆಟ್‌ಗಳ ಗೆಲುವಿನೊಂದಿಗೆ ಅಭಿಯಾನ ಆರಂಭಿಸಿದ್ದಾರೆ. ವೈಷ್ಣವಿ ೬-೦, ೬-೩ ಸೆಟ್‌ಗಳಿಂದ ಭಾರತದವರೆ ಆದ ಚೆವಿಕಾ ರೆಡ್ಡಿ ಸಮಾ ಅವರನ್ನು ಸೋಲಿಸಿದ್ದಾರೆ. ಅರ್ಹತಾ ಸುತ್ತಿನ ವಿಜೇತೆ ಲಕ್ಷ್ಮೀ ಸಿರಿದಂಡು, ಜಪಾನ್‌ನ ೭ನೇ ಶ್ರೇಯಾಂಕಿತ ಆಟಗಾರ್ತಿ ಮಿಚಿಕಾ ಒಜೆಕಿ ವಿರುದ್ಧ ಸೋಲು ಅನುಭವಿಸಿದ್ದಾರೆ. ಮತ್ತೊಂದು ಪಂದ್ಯದಲ್ಲಿ ಭಾರತದ ಅಮೋದಿನಿ ನಾಯಕ್, ಇಸ್ರೇಲ್‌ನ ಮಯಾನ್ ಲಾರೋನ್ ವಿರುದ್ಧ ೬-೦, ೬-೧ ಸೆಟ್‌ಗಳಿಂದ ಸೋಲು ಅನುಭವಿಸಿದರು.

<><><><>

ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಅರಣ್ಯ ವಿಭಾಗ ವ್ಯಾಪ್ತಿಯಲ್ಲಿ ಕಾಡಾನೆಗಳು ನಾಡಿಗೆ ಬಾರದಂತೆ ತಡೆಯಲು ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದ್ದು ೧೨ ಕೋಟಿ ೭೭ ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ ಎಂದು ಶೃಂಗೇರಿ ಕ್ಷೇತ್ರದ ಶಾಸಕ ಟಿ.ಡಿ ರಾಜೇಗೌಡ ತಿಳಿಸಿದ್ದಾರೆ. ನರಸಿಂಹರಾಜಪುರದಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು ರಾಜ್ಯ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದೆ. ನರಸಿಂಹರಾಜಪುರ, ಬಾಳೆಹೊನ್ನೂರು, ಚಿಕ್ಕ ಅಗ್ರಹಾರ ಭಾಗಗಳಲ್ಲಿ ಬ್ಯಾರಿಕೇಡ್ ಅಳವಡಿಕೆಗೆ ಯೋಜನೆ ರೂಪಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>